ಜಿಲ್ಲಾ ವ್ಯವಸ್ಥಾಪಕರ ಕಛೇರಿ

4505 - ಶ್ರೀ ಜಿ.ಎನ್. ನಂಜುಂಡಸ್ವಾಮಿ (ಕೊಳ್ಳೇಗಾಲ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದಾಗಿ ರಚನೆಯಾದ ಏಳು ಜಿಲ್ಲೆಗಳಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ವತಿಯಿಂದ ಪ್ರತ್ಯೇಕ ಜಿಲ್ಲಾ ವ್ಯವಸ್ಥಾಪಕರ ಕಛೇರಿಯನ್ನು ತೆರೆಯಲಾಗಿದೆಯೇ?

ಆ) ಹಾಗಿದ್ದಲ್ಲಿ ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ಕಛೇರಿಗಳನ್ನು ತೆರೆಯಲಾಗಿದೆ?

ಇ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು ಮತ್ತು ಎಂದಿನಿಂದ ತೆರೆಯಲು ಕ್ರಮ ತೆಗೆದುಕೊಳ್ಳಲಾಗುವುದು?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

ಅ) ಇನ್ನೂ ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಐದು ಹೊಸ ಜಿಲ್ಲೆಗಳಲ್ಲಿ (ಹಾವೇರಿ, ಗದಗ್, ಬಾಗಲಕೋಟೆ, ಕೊಪ್ಪಳ ಮತ್ತು ಚಿತ್ರದುರ್ಗ) ಜಿಲ್ಲಾ ವ್ಯವಸ್ಥಾಪಕರ ಕಛೇರಿಗಳನ್ನು ತೆರೆಯುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ. ಉಳಿದ ಎರಡು ಜಿಲ್ಲೆಗಳಾದ ಚಾಮರಾಜನಗರ ಮತ್ತು ಉಡುಪಿ ಜಿಲ್ಲೆಗಳಲ್ಲಿ ನಿಗಮದ ಹೆಚ್ಚಿನ ವಹಿವಾಟು ಇಲ್ಲದೇ ಇರುವುದರಿಂದ ನಿಗಮದ ಜಿಲ್ಲಾ ಕಛೇರಿಗಳನ್ನು ತೆರೆಯುವ ಅವಶ್ಯಕತೆ ಕಂಡುಬಂದಿಲ್ಲ. ಹಿಂದೆ ಇದ್ದ ಜಿಲ್ಲೆಗಳ ಕೇಂದ್ರಗಳೇ ಈ ಹೊಸ ಕೇಂದ್ರಗಳನ್ನು ನಿರ್ವಹಿಸುತ್ತಿವೆ.

ಕೊಳ್ಳೇಗಾಲ ಕ್ಷೇತ್ರದಲ್ಲಿ ವಿದ್ಯುತ್ ಕೊರತೆ

4506 - ಶ್ರೀ ನಂಜುಂಡಸ್ವಾಮಿ ಜಿ.ಎನ್. (ಕೊಳ್ಳೇಗಾಲ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲ ಮತ ಕ್ಷೇತ್ರದಲ್ಲಿ ವಿದ್ಯುತ್ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಮಹದೇಶ್ವರ ಸಕ್ಕರೆ ಕಾರ್ಖಾನೆಯಲ್ಲಿ ಸಹ ಉತ್ಪಾದನೆ (ಕೋ-ಜನರೇಷನ್) ಮೂಲಕ ವಿದ್ಯುತ್ ಉತ್ಪಾದಿಸಲು ಮನವಿಗಳು ಬಂದಿದೆಯೇ?

ಇ) ಹಾಗಿದ್ದಲ್ಲಿ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು?

ಈ) ಹಾಗಿಲ್ಲದಿದ್ದಲ್ಲಿ ಎಂದಿನಿಂದ ಸಹ ಉತ್ಪಾದನೆ (ಕೋ-ಜನರೇಷನ್) ಪ್ರಾರಂಭಿಸಲಾಗುವುದು?